ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ರಾಯಚೂರು ಜಿಲ್ಲೆಯಲ್ಲಿರುವ ಪಿಎಲ್‌ಡಿಬಿ ಬ್ಯಾಂಕ್‌ಗಳ ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನ ಸಭೆಯಿಂದ ಚುನಾಯಿತರಾದವರು):-

488 (750) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಆರ್‌ಎಪಿಸಿಎಂಎಸ್, ಮಾನ್ವಿ ಮತ್ತು ಸಿಂಧನೂರು ತಾಲ್ಲೂಕು ಸಹಕಾರ ಸಂಘಗಳ ಪರಿಸ್ಥಿತಿ ಸುಧಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಈ ಸಹಕಾರ ಸಂಘಗಳಿಗೆ ಇರುವ ಆಸ್ತಿ ರಕ್ಷಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿರುವ ಪಿಎಲ್‌ಡಿಬಿ ಬ್ಯಾಂಕ್‌ಗಳ ಪರಿಸ್ಥಿತಿ ಸುಧಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ಮತ್ತು ಮಾನ್ವಿ ತಾಲ್ಲೂಕುಗಳ ಪಿಎಲ್‌ಡಿಬಿ ಬ್ಯಾಂಕ್‌ಗಳಿಗೆ ಎಸ್‌ಎಲ್‌ಡಿಬಿ ಬ್ಯಾಂಕ್‌ನಿಂದ ಮಂಜೂರಾಗಿರುವ ಅನುದಾನ ಎಷ್ಟು ?